ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಬಿಸಿಯೂಟ

4061 (4512) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳ 1 ರಿಂದ 5ನೇ ತರಗತಿವರೆಗಿನ ಮಕ್ಕಳಿಗೆ ನೀಡಲಾಗುತ್ತಿರುವ ಬಿಸಿಯೂಟ ಕಾರ್ಯಕ್ರಮದಡಿ ನಗರಪ್ರದೇಶಗಳಲ್ಲಿ ಪ್ರತಿ ಶಾಲೆಗಳಲ್ಲೂ ಅಡಿಗೆ ಮಾಡುವುದರಿಂದ ಬೊಕ್ಕಸಕ್ಕೆ ಹೆಚ್ಚಿನ ಹೊರೆ ಬೀಳುವುದರಿಂದ ಆರ್ಥಿಕ ಮಿತವ್ಯಯ ಸಾಧಿಸುವ ದೃಷ್ಟಿಯಿಂದ ನಗರ ಪ್ರದೇಶಗಳಲ್ಲಿ 5 ಅಥವಾ 6 ಕಡೆ ಅಡಿಗೆ ತಯಾರಿಸಿ ವಿತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: ವಿವರ ನೀಡುವುದು:

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಕೇಂದ್ರೀಕೃತ ಅಡಿಗೆ ಕೇಂದ್ರಗಳ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ.

ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳನ್ನು ನಗರ ಸಭೆಯ ಆಡಳಿತ ವ್ಯಾಪ್ತಿಗೆ ವಹಿಸುವ ಬಗ್ಗೆ

4062 (4513) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಾಲಿ ನಗರ ಪ್ರದೇಶದಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಆಡಳಿತ ವ್ಯಾಪ್ತಿಯನ್ನು ಜಿಲ್ಲಾ ಪಂಚಾಯ್ತಿ ವ್ಯಾಪ್ತಿಯಿಂದ ಸಂಬಂಧಪಟ್ಟ ನಗರಸಭೆಗೆ ಹಾಗೂ ಪುರಸಭೆಗಳ ವ್ಯಾಪ್ತಿಗೆ ವಹಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ? ತಿಳಿಸುವುದು.

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ಇದೆ

ಶಿವಮೊಗ್ಗ ಕ್ಷೇತ್ರದ ವ್ಯಾಪ್ತಿಯಲ್ಲಿ ಎಸ್.ಜಿ.ಆರ್.ವೈ ಕಾಮಗಾರಿಗಳು

4063 (4564) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಈವರೆಗೆ ಎಸ್.ಜಿ.ಆರ್.ವೈ. ಯೋಜನೆಯಡಿ ಕೈಗೊಂಡ ವಿವಿಧ ಕಾಮಗಾರಿಗಳು ಯಾವುವು; ನಿಯಮಾನುಸಾರ ಈ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ; ಇದಕ್ಕೆ ತಗಲಿರುವ ವೆಚ್ಚವೆಷ್ಟು; ಯೋಜನೆಯಡಿಯಲ್ಲಿ ವಿತರಿಸಲಾಗಿರುವ ಧಾನ್ಯ ಪ್ರಮಾಣ ಹಾಗೂ ವೆಚ್ಚವೆಷ್ಟು; ನಿಯಮಾನುಸಾರ ವಿತರಣೆಯಾಗಿದೆಯೇ?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು):

ಅ) ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಿಂದ ಸಂಪೂರ್ಣ ಗ್ರಾಮೀಣಾ ರೋಜ್‌ಗಾರ್ ಯೋಜನೆಯ ಮೊದಲನೇ ಹಾಗೂ ಎರಡನೇ ವಾಹಿನಿಗಳಡಿ ಕೈಗೊಂಡ ಕಾಮಗಾರಿಗಳು ರಸ್ತೆ, ಚರಂಡಿ ನಿರ್ಮಾಣ, ಅರಣ್ಯೀಕರಣ, ಕೆರೆ ಹೂಳೆತ್ತುವುದು, ನೀರಾವರಿ, ನೆಡುತೋಪು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ ವೈಯುಕ್ತಿಕ ಲಾಭ ಒದಗಿಸುವ ಜಲಾನಯನಗಳ ವಿನ್ಯಾಸಗಳು ಹಾಗೂ ಇತರೆ. ಹೀಗೆ ಒಟ್ಟು 422 ಕಾಮಗಾರಿಗಳನ್ನು ಕೈಗೊಂಡು ರೂ.47.05 ಲಕ್ಷಗಳಷ್ಟು ನಗದನ್ನು ವೆಚ್ಚಮಾಡಿ 6937.43 ಕ್ವಿಂಟಾಲುಗಳಷ್ಟು